## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ನಾಗರಾಜು, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕುಣಿಗಲ್, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಕರ್ನಾಟಕ ಲೋಕಾಯುಕ್ತಕ್ಕೆ ವಹಿಸುವ ಬಗ್ಗೆ.

**ಓದಲಾಗಿದೆ:** ಸಹಾಯಕ ನಿಬಂಧಕರು (Legal Opinion-2), ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಕಂಪ್ಲೆಂಟ್/ಉಪಲೋಕ್/ ಬಿಡಿ350/2012/ಎಆರ್‌ಎಲ್‌ಓ-2, ದಿನಾಂಕ: 3-5-2012.

****

**ಪ್ರಸ್ತಾವನೆ:**

ಶ್ರೀ ನಾಗರಾಜು, ಕಿರಿಯ ಇಂಜಿನಿಯರ್, ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕುಣಿಗಲ್, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕು, ಬೇಗೂರು ಗ್ರಾಮ ಪಂಚಾಯತಿಗೆ ಸೇರಿದ ಕೂತರಹಳ್ಳಿ ಗ್ರಾಮದಲ್ಲಿ ಶ್ರೀ ಆಂಜನೇಯ ದೇವಸ್ಥಾನದಿಂದ ಹರಿಜನ ಕಾಲೋನಿಯವರೆಗೆ 100 ಮೀಟರ್ ಬಾಕ್ಸ್ ಚರಂಡಿಯನ್ನು ನಿರ್ಮಿಸಿದ ಗುತ್ತಿಗೆದಾರರಿಗೆ ಕಾಮಗಾರಿಯ ವೆಚ್ಚ ರೂ.36,525/-ಗಳ ಚೆಕ್ ವಿತರಿಸಲು ಶ್ರೀ ಗುರುಪ್ರಸಾದ್ ಬಿನ್ ರಾಮಕೃಷಪ್ಪ, ಗುತ್ತಿಗೆದಾರರು ಇವರಿಂದ ರೂ.7,000/-ಗಳ ಅಕ್ರಮ ಸಂಭಾವನೆ ನೀಡಲು ಒತ್ತಾಯಿಸಿ, ಆ ಪೈಕಿ ರೂ.5,500/- ಗಳನ್ನು ಪಡೆದು ಉಳಿದ ರೂ.1500/-ಗಳನ್ನು ಪಡೆಯುತ್ತಿದ್ದ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿಬಿದ್ದಿರುತ್ತಾರೆ. ಆದ್ದರಿಂದ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು, 1957ರ ನಿಯಮ-14(ಎ)ರ ಪ್ರಕಾರ ಇಲಾಖಾ ವಿಚಾರಣೆಯನ್ನು ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸುವಂತೆ ಮೇಲೆ ಓದಲಾದ ದಿನಾಂಕ:3-5-2012ರ ಪತ್ರದಲ್ಲಿ ಸಹಾಯಕ ನಿಬಂಧಕರು(Legal Opinion-2), ಕರ್ನಾಟಕ ಲೋಕಾಯುಕ್ತ, ಇವರು ಕೋರಿರುತ್ತಾರೆ.

ಉಪಲೋಕಾಯುಕ್ತ-1ರವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ನಾಗರಾಜು, ಕಿರಿಯ ಇಂಜಿನಿಯರ್, ಇವರ ವಿರುದ್ಧ ಮಾಡಿರುವ ಆರೋಪಗಳಲ್ಲಿ ಸತ್ಯಾಂಶವಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಈ ನೌಕರರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಉಪಲೋಕಾಯುಕ್ತ-1 ರವರಿಗೆ ವಹಿಸಲು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

***ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ:03-07-2012.***

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರ ಪ್ರಕಾರ

..2

ಶ್ರೀ ನಾಗರಾಜು, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕುಣಿಗಲ್, ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

3/7/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1) ಮಹಾಲೇಖಪಾಲರು(ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ಉಪ ಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ ಜಲಸಂಪನ್ಮೂಲ ಇಲಾಖೆ.
5) ಸಹಾಯಕ ನಿಬಂಧಕರು(Legal Opinion-2), ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
6) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
7) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದ), ಬೆಂಗಳೂರು.
8) ಮಾನ್ಯ ಗ್ರಾ.ಅ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ(ಸೇವೆಗಳು-ಸಿ).
10) ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ತುಮಕೂರು.
11) ಸಂಬಂಧಿಸಿದ ನೌಕರರು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು, ಇವರ ಮುಖಾಂತರ)
12) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) /ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
13) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.